ಈ ದಿನ ದಿಃ16.06.2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲು ಶ್ರೀ ಎಲ್.ಪಿ.ಎಂ ಪ್ರತಿವಾದಿ ಪರ ವಕೀಲರಿಂದಃ-**

ನನ್ನ ಮುಖ್ಯವಿಚಾರಣೆ ಪ್ರಮಾಣಪತ್ರದಲ್ಲಿ ದಾವಾಸ್ವತ್ತಿನ ಸ್ವಲ್ಪ ಭಾಗವನ್ನು ನನ್ನ ತಂದೆ ಮಾರಾಟ ಮಾಡಿರುವ ವಿಚಾರವನ್ನು ನಮೂದಿಸಿದ್ದು, ಸದರಿ ಅಂಶವನ್ನು ದಾವೆಯಲ್ಲಿ ನಮೂದಿಸಿರುತ್ತೀರಾ ಎಂಬ ಪ್ರಶ್ನೆಗೆ ಸಾಕ್ಷಿಯು ವಾದಪತ್ರದಲ್ಲಿ ಬರೆದಿರುತ್ತೇನೆಂದು ನುಡಿಯುತ್ತಾರೆ. ದಾವಾಸ್ವತ್ತಿನ ಚಕ್ಕುಬಂದಿ ಕುರಿತಾಗಿ ಪಂಚಾಯಿತಿಯ ಕಾನೇಸುಮಾರಿ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ಕಾನೇಸುಮಾರಿ ದಾಖಲೆಯಲ್ಲಿ ಚಕ್ಕುಬಂದಿ ಮತ್ತು ವಿಸ್ತೀರ್ಣ ನಮೂದಿಸಿರುವುದಿಲ್ಲ ಎಂದರೆ ಸರಿಯಲ್ಲ.

ಎಂ.ಆರ್ ನಂ.6/93-94 ನ್ನು ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಿರುತ್ತೇನೆ. ಸದರಿ ಮೇಲ್ಮನವಿಯಲ್ಲಿ ದಿವಾನಿ ನ್ಯಾಯಾಲಯದಲ್ಲಿ ಬಗೆಹರಿಸಿಕೊಳ್ಳುವಂತೆ ಆದೇಶ ಆಗಿರುತ್ತದೆ.

ಪ್ರತಿವಾದಿಯರು ತಮ್ಮ ಜಾಗೆಯ ಕುರಿತು ಸರ್ವೆ ಮಾಡಿದ ದಾಖಲೆಗೆ ನಾನು ಸಹಿ ಮಾಡಿರುವುದಿಲ್ಲ. ಸಾಕ್ಷಿಯು ಮುಂದುವರೆದು, ಕೇವಲ ಸರ್ವೆ ನೋಟಿಸ್ಸಿಗೆ ಮಾತ್ರ ಸಹಿ ಮಾಡಿರುತ್ತೇನೆಂದು ನುಡಿಯುತ್ತಾರೆ. ಸರ್ವೆ ಕಾಲಕ್ಕೆ ನಾನು ಹಾಜರಿದ್ದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸರ್ವೆ ಕಾರ್ಯ ಸರಿಯಾಗಿ ಮಾಡದೆ ಇರುವುದರಿಂದ ಸಹಿ ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ. ವಾದಪತ್ರದಲ್ಲಿ

ಸಲ್ಲಿಸಿದ ದಾವಾಸ್ವತ್ತಿನ ಚಕ್ಕುಬಂದಿ ಸುಳ್ಳಾಗಿರುತ್ತದೆ ಎಂದರೆ ಸರಿಯಲ್ಲ.

ಈ ಪ್ರಕರಣಕ್ಕೆ ಅನುಕೂಲವಾಗಲು ದಾವೆಯಲ್ಲಿ ಸಲ್ಲಿಸಿರುವ ಎಲ್ಲಾ ದಾಖಲೆಗಳನ್ನು ಸೃಷ್ಟಿಸಿ ಹಾಜರು ಪಡಿಸಿರುತ್ತೇನೆಂದರೆ ಸರಿಯಲ್ಲ. ನಿಪಿ-24 ಮತ್ತು 25 ದಾವಾ ಆಸ್ತಿಗೆ ಸಂಬಂಧಿಸಿರುವುದಿಲ್ಲ ಎಂದರೆ ದಾವಾಸ್ತಿಯ ಚಕ್ಕುಬಂದಿಯ ಕುರಿತಾಗಿ ಇರುತ್ತವೆಂದು ನುಡಿಯುತ್ತಾರೆ. ದಾವಾಸ್ವತ್ತು ಈಗಲೂ ಕಾನೇಸುಮಾರಿ ಆಗಿರುವುದಿಲ್ಲ ಎಂದರೆ ಸರಿಯಲ್ಲ. ದಾವಾಸ್ವತ್ತಿಗೆ ಕಾನೇಸುಮಾರಿ ನಂಬರ್ ಹೇಗೆ ಬಂದಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಮಿಲ್ಕ್ ಡೈರಿಯಲ್ಲಿ ಕೆಲಸ ಮಾಡಿರುತ್ತೇನೆಂದರೆ ಸರಿಯಲ್ಲ. ನಾನು ಮಿಲ್ಕ್ ಡೈರಿಯಲ್ಲಿ ಕೆಲಸ ಮಾಡಿದ್ದರಿಂದ ಪಂಚಾಯಿತಿ ಅಧಿಕಾರಿಗಳ ಮೇಲೆ ಪ್ರಭಾವ ಬೀರಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡಿರುತ್ತೇನೆಂದರೆ ಸರಿಯಲ್ಲ.

**ಮರುವಿಚಾರಣೆಃ- ಇಲ್ಲ.**

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ,

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ಕನಕಪುರ.